ದಿನಾಂಕಃ 07.11.2025 ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆ : ಅರ್ಜಿದಾರರ ಪರ ವಕೀಲರಿಂದ :**

ಆಧಾರ್ ಕಾರ್ಡಿನ ನೋಟರಿ ಪ್ರತಿಯನ್ನು ನಿಪಿ-10 ಎಂದು, ಪಾನ್ ಕಾರ್ಡಿನ ನೋಟರಿ ಪ್ರತಿಯನ್ನು ನಿಪಿ-11 ಎಂದು, ಬ್ಯಾಂಕ್ ಪಾಸ್ ಬುಕ್ ನ ನೋಟರಿ ಪ್ರತಿಯನ್ನು ನಿಪಿ-12 ಎಂದು ಗುರುತಿಸಲಾಯಿತು.

**ಪಾಟೀ ಸವಾಲು : 2ನೇ ಎದುರುದಾರರ ಪರ ವಕೀಲರಿಂದ :**

ನಾನು ಕೆಲಸಕ್ಕೆ ಹೋಗುತ್ತಿಲ್ಲ, ನನ್ನ ತಂದೆ ನನ್ನನ್ನು ನೋಡಿಕೊಳ್ಳುತ್ತಿದ್ದಾರೆ. ನಾನು ಮೊದಲು ಕೆಲಸ ಮಾಡುತ್ತಿದ್ದ ಕಂಪನಿಯ ಸಂಬಳದ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ. ನಾನು ಹೇಳಿದಷ್ಟು ಸಂಬಳ ಇಲ್ಲ ಎಂದರೆ ಸರಿಯಲ್ಲ. ನಾನು ಈಗಲೂ ಸಹ ಸದರಿ ಕಂಪನಿಯಲ್ಲಿ ಕೆಲಸ ಮಾಡುತ್ತಿರುವ ಕಾರಣ ಸದರಿ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಆ ದಿನ ಚಲಾಯಿಸುತ್ತಿದ್ದ ದ್ವಿಚಕ್ರ ವಾಹನ ನನ್ನ ತಂದೆಯ ಹೆಸರಿನಲ್ಲಿರುತ್ತದೆ. ನನಗೆ ದ್ವಿಚಕ್ರ ವಾಹನ ಚಾಲನೆ ಮಾಡಲು ಪರವಾನಗಿ ಇರುತ್ತದೆ. ನಮ್ಮ ವಾಹನಕ್ಕೆ ವಿಮೆ ಇರುತ್ತದೆ. ನನ್ನ ಚಾಲನಾ ಪರವಾನಗಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ತೊಂದರೆ ಇಲ್ಲ ಎಂದರೆ ಸಾಕ್ಷಿ ನಾನು ಅದನ್ನು ನನ್ನ ವಕೀಲರಿಗೆ ಕೊಟ್ಟಿರುತ್ತೇನೆ ಎನ್ನುತ್ತಾರೆ. 6 ದಿನ ತಡವಾಗಿ ಪೊಲೀಸರಿಗೆ ದೂರು ಕೊಟ್ಟಿರುತ್ತೇವೆ. ಯಾವ ಕಾರಣಕ್ಕೆ ತಡವಾಗಿ ಕೊಟ್ಟಿರುತ್ತೇವೆಂದು ದೂರಿನಲ್ಲಿ ನಮೂದು ಮಾಡಿಲ್ಲ. ಆ ಸಮಯದಲ್ಲಿ ಕತ್ತಲಿದ್ದ ಕಾರಣ ನಾನೇ ವಾಹನ ನಿಯಂತ್ರಣ ತಪ್ಪಿ ಬಿದ್ದಿದ್ದು, ನನಗೆ ಬೇರೆ ವಾಹನ ಡಿಕ್ಕಿಪಡಿಸಿಲ್ಲ ಎಂದರೆ ಸರಿಯಲ್ಲ. ವಿಮೆ ಪಡೆಯುವ ಸಲುವಾಗಿ ತಡವಾಗಿ ದೂರು ನೀಡಿ ಇನ್ನೊಂದು ವಾಹನವನ್ನು ಸೇರಿಸಿರುತ್ತೇವೆ ಎಂದರೆ ಸರಿಯಲ್ಲ. 1ನೇ ಎದುರುದಾರರು ನನಗೆ ಪರಿಚಯವೆಂದರೆ ಸುಳ್ಳು. ನಾನು ಆ ದಿನ ಹೆಲ್ಮೆಟ್ ಹಾಕಿರಲಿಲ್ಲ ಎಂದರೆ ಸುಳ್ಳು.

ಹೆಲ್ಮೆಟ್ ಹಾಕಿದ್ದರೆ ಆ ರೀತಿಯ ಗಾಯಗಳಾಗುತ್ತಿರಲಿಲ್ಲ ಎಂದರೆ ಸರಿಯಲ್ಲ. ಮುಖಕ್ಕೆ ಮತ್ತು ಭುಜಕ್ಕೆ ಶಸ್ತ್ರಚಿಕಿತ್ಸೆ ಮಾಡಿರುತ್ತಾರೆ. ಅಪಘಾತವಾದ ನಂತರ ಪ್ರಜ್ವಲ್ ಆಸ್ಪತ್ರೆಗೆ ಹೋಗಿರುತ್ತೇನೆ.

**2.** ನಾನು ಮಾಸಿಕವಾಗಿ ರೂ.25,000/- ಸಂಪಾದನೆ ಮಾಡುತ್ತಿದ್ದ ಬಗ್ಗೆ ಯಾವುದೇ ದಾಖಲೆ ಕೊಟ್ಟಿಲ್ಲ. ನನಗೆ ನಾನು ಹೇಳಿದಷ್ಟು ಆದಾಯ ಇಲ್ಲ ಎಂದರೆ ಸರಿಯಲ್ಲ. ನಾನು ಚಿಕಿತ್ಸೆಗಾಗಿ ಒಳರೋಗಿಯಾಗಿ 10 ದಿನ ಆಸ್ಪತ್ರೆಗೆ ದಾಖಲಾಗಿಲ್ಲ ಹಾಗೂ 4 ಲಕ್ಷ ರೂ.ಗಳನ್ನು ಚಿಕಿತ್ಸೆಗಾಗಿ ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಆಸ್ಪತ್ರೆಯಲ್ಲಿದ್ದ ಸಮಯದಲ್ಲಿ ಪ್ರತಿದಿನ 1,000/- ರೂ.ಗಳನ್ನು ಸಹಾಯಕನಿಗೆ ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಭವಿಷ್ಯದ ಚಿಕಿತ್ಸೆಗಾಗಿ 4 ಲಕ್ಷ ರೂ. ಅವಶ್ಯಕತೆ ಇಲ್ಲ ಎಂದರೆ ಸುಳ್ಳು. ಅಪಘಾತಕ್ಕೂ ಮುಂಚೆ ನಾನು ಚೆನ್ನಾಗಿದ್ದು, ಈಗಲೂ ಸಹ ಚೆನ್ನಾಗಿರುತ್ತೇನೆ ಎಂದರೆ ಸುಳ್ಳು. ಅಪಘಾತ ನನ್ನ ತಪ್ಪಿನಿಂದ ಆಗಿದ್ದು ವಿಮೆ ಪರಿಹಾರ ಪಡೆಯುವ ಸಲುವಾಗಿ ಸುಳ್ಳು ಅರ್ಜಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯಲು ದಾಖಲೆಗಳನ್ನು ಸೃಷ್ಟಿಸಿಕೊಂಡು ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಪ್ರಕರಣಕ್ಕೆ ಅನುಕೂಲವಾಗುವಂತೆ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಎಂ.ಎ.ಸಿ.ಟಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**